# ಸಿವಿಲ್ ಜಡ್ಜ್ ಮತ್ತು ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ,

# ಹೆಗ್ಗಡದೇವನಕೋಟೆ

**ಸಿ.ಸಿ. ನಂಃ 1084/2013**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಆರ್. ಸಂತೋಷ್ ನಾಯಕ್ | ಪಿ.ಡಬ್ಲ್ಯೂ-3 |
| ತಂದೆಯ ಹೆಸರು | : | ರೇಖ್ಯೆನಾಯಕ್ | |
| ವಯಸ್ಸು | : | 44 ವರ್ಷ | |
| ಉದ್ಯೋಗ | : | ಸಹಾಯ ಅರಣ್ಯ ಸಂರಕ್ಷಣಾಧಿಕಾರಿ, ಸಾಮಾಜಿಕ ಅರಣ್ಯ ವಿಭಾಗ, ಚಿತ್ರದುರ್ಗ | ಸಾಕ್ಷಿಗೆ ಪ್ರಮಾಣ ವಚನ ಭೋದಿಸಿದ ದಿನಾಂಕಃ **20.06.2022** |
| ವಾಸಸ್ಥಳ | : | ಚಿತ್ರದುರ್ಗ | ಅಪರಾಧಿಕ ಪ್ರಕ್ರಿಯಾ ಸಂಹಿತೆ ಕಲಂ 299 ರಡಿಯಲ್ಲಿ ಸಾಕ್ಷಿಯ ಹೇಳಿಕೆ. |

**ಮುಖ್ಯ ವಿಚಾರಣೆಃ ಎ.ಪಿ.ಪಿ. ರವರಿಂದಃ**

ನಾನು ದಿನಾಂಕಃ 25.05.2010 ರಿಂದ 09.07.2012 ರವರೆಗೆ ಹೆಗ್ಗಡದೇವನಕೋಟೆಯ ಮೇಟಿಕುಪ್ಪೆ ವನ್ಯಜೀವಿ ವಲಯದಲ್ಲಿ ವಲಯ ಅರಣ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ನಾನು ಫ್ರಾಸಾ-2 ರವರಿಂದ ಕಡತವನ್ನು ಪಡೆದು ಪರಿಶೀಲಿಸಿ ಚಾಸಾ-1 ರಿಂದ ಚಾಸಾ-4 ರವರ ಹೇಳಿಕೆ ಪಡೆದುಕೊಂಡಿರುತ್ತೇನೆ ಮತ್ತು ವಶಪಡಿಸಿಕೊಂಡ ಮರದ ತುಂಡುಗಳ ಮೌಲ್ಯಮಾಪನ ವರದಿಯನ್ನು ತಯಾರಿಸಿರುತ್ತೇನೆ. ಸದರಿ ಮೌಲ್ಯಮಾಪನ ಧೃಡೀಕರಣ ಪತ್ರವನ್ನು ಈಗ ನೋಡುತ್ತಿದ್ದೇನೆ. ಸಾಕ್ಷಿಯು ಸದರಿ ದಾಖಲೆಯನ್ನು ನೋಡಿ ಗುರುತಿಸಿದ್ದರಿಂದ, ಸದರಿ ದಾಖಲೆಯನ್ನು ನಿ.ಪಿ.-9 ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.-9(ಎ) ಎಂದು ಗುರುತಿಸಲಾಯಿತು. ಫ್ರಾಸಾ-1 ರವರು ವಶಪಡಿಸಿಕೊಂಡ ಸ್ವತ್ತುಗಳ ಬಗ್ಗೆ

ಭಾವಚಿತ್ರಗಳನ್ನು ನನ್ನ ಮುಂದೆ ಹಾಜರುಪಡಿಸಿದ್ದು, ಅವುಗಳನ್ನು ನೋಡಿದರೆ ಗುರುತಿಸುತ್ತೇನ್ತೆ ಸಾಕ್ಷಿಯು ನಿ.ಪಿ.–2 ರಿಂದ ನಿ.ಪಿ.–7 ನ್ನು ನೋಡಿ ಗುರುತಿಸಿರುತ್ತಾರೆ. ನಂತರ ತನಿಖೆ ಮಾಡಿ ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಆರೋಪಿಗಳು ನ್ಯಾಯಾಲಯಕ್ಕೆ ಗೈರು ಹಾಜರಾಗಿದ್ದು, ಅವರ ವಿರುದ್ಧ ಸಮನ್ಸ, ವಾರೆಂಟ್, ಉದ್ಘೋಷಣೆ ಮತ್ತು ಜಪ್ತಿ ವಾರೆಂಟ್ ಹೊರಡಿಸಿದ್ದರೂ ಅವರ ಹಾಜರಾತಿಯನ್ನು ಪಡೆಯಲಾಗಿಲ್ಲ, ಆದ್ದರಿಂದ ಅಪರಾಧಿಕ ಪ್ರಕ್ರಿಯಾ ಸಂಹಿತೆ ಕಲಂ 299 ರ ಅಡಿಯಲ್ಲಿ ಈ ಮೇಲಿನಂತೆ ಸಾಕ್ಷಿಯ ಹೇಳಿಕೆಯನ್ನು ದಾಖಲು ಮಾಡಿಕೊಳ್ಳಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**